# Akashvani : Bangalore

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 04.05.2024 / 18.40 hrs

<u>ಮುಖ್ಯಾಂಶಗಳು</u>

೧. ರಾಜ್ಯದಲ್ಲಿ ೨ನೇ ಹಂತದ ಮತದಾನಕ್ಕೆ ದಿನಗಣನೆ ; ನಾಳೆ ಸಂಜೆ ೫ ಗಂಟೆಗೆ ಬಹಿರಂಗ ಪ್ರಚಾರ ಅಂತ್ಯ

೨. ಪಾರದರ್ಶಕ ಚುನಾವಣೆಗೆ ಆಯೋಗದಿಂದ ಸಕಲ ಸಿದ್ಧತೆ ; ಕಡ್ಡಾಯ ಮತದಾನಕ್ಕೆ ಕರೆ

೩. ನಾಳೆ ದೇಶಾದ್ಯಂತ ನೀಟ್ ಪರೀಕ್ಷೆ ; ೨೪ ಲಕ್ಷಕ್ಕೂ ಹೆಚ್ಚು ಅಭ್ಯರ್ಥಿಗಳ ಭವಿಷ್ಯ ನಿರ್ಧಾರ

೪. ಐಪಿಎಲ್ ಕ್ರಿಕೆಟ್: ಬೆಂಗಳೂರಿನಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಗುಜರಾತ್ ಟೈಟಾನ್ಸ್ ಹಣಾಹಣಿ

<><*<><>*><>

ರಾಜ್ಯದಲ್ಲಿ ಇದೇ ೭ ರಂದು ೨ನೇ ಹಂತದ ಲೋಕಸಭಾ ಚುನಾವಣೆ ನಡೆಯಲಿದ್ದು, ಬಹಿರಂಗ ಪ್ರಚಾರಕ್ಕೆ ನಾಳೆ ಸಂಜೆ ೫ ಗಂಟೆಗೆ ತೆರೆ ಬೀಳಲಿದೆ. ಬಳಿಕ ಮನೆ ಮನೆ ಪ್ರಚಾರಕ್ಕೆ ತೆರಳಿ ಅಭ್ಯರ್ಥಿಗಳು ಮತಯಾಚಿಸಲಿದ್ದಾರೆ. ಎರಡನೇ ಹಂತದಲ್ಲಿ ಚಿಕ್ಕೋಡಿ, ಬೆಳಗಾವಿ, ಬಾಗಲಕೋಟೆ, ವಿಜಯಪುರ, ಕಲಬುರಗಿ, ರಾಯಚೂರು, ಬೀದರ್, ಕೊಪ್ಪಳ, ಬಳ್ಳಾರಿ, ಹಾವೇರಿ, ಧಾರವಾಡ, ಉತ್ತರಕನ್ನಡ, ದಾವಣಗೆರೆ ಮತ್ತು ಶಿವಮೊಗ್ಗ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ. ಒಟ್ಟು ೧೪ ಕ್ಷೇತ್ರಗಳಲ್ಲಿ ಒಟ್ಟು ೨೨೭ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಒಟ್ಟು ಒಂದು ಕೋಟಿ ೨೯ ಲಕ್ಷ ೪೮ ಸಾವಿರದ ೯೭೮ ಪುರುಷ ಮತದಾರರು ಹಾಗೂ ಒಂದು ಕೋಟಿ ೨೯ ಲಕ್ಷ ೬೬ ಸಾವಿರದ ೫೭೦ ಮಹಿಳಾ ಮತದಾರರು ಸೇರಿದಂತೆ ಒಟ್ಟು ೨ ಕೋಟಿ ೫೯ ಲಕ್ಷ ೧೭ ಸಾವಿರದ ೪೯೩ ಮತದಾರರು ತಮ್ಮ ಹಕ್ಕು ಚಲಾಯಿಸಲಿದ್ದಾರೆ. ಒಟ್ಟಾರೆಯಾಗಿ ೨ನೇ ಹಂತದಲ್ಲಿ ಮಹಿಳಾ ಮತದಾರರೇ ಪ್ರಾಬಲ್ಯ ಮೆರೆದಿದ್ದಾರೆ. ಕಲಬುರಗಿಯಲ್ಲಿ ಅತಿ ಹೆಚ್ಚು ಅಂದರೆ ೧೦ ಲಕ್ಷ ೪೭ ಸಾವಿರದ ೯೬೧ ಮಂದಿ ಮಹಿಳಾ ಮತದಾರರಿದ್ದಾರೆ. ಚಿಕ್ಕೋಡಿಯಲ್ಲಿ ಅತಿ ಹೆಚ್ಚು ಅಂದರೆ ೫೮ ಸಾವಿರದ ೧೭೬ ಮಂದಿ ಯುವ ಮತದಾರರಿದ್ದಾರೆ. ಉಪ ಚುನಾವಣೆ ನಡೆಯುವ ಸುರಪುರ ವಿಧಾನಸಭಾ ಕ್ಷೇತ್ರದಲ್ಲಿ ಒಂದು ಲಕ್ಷ ೪೨ ಸಾವಿರದ ೫೩೨ ಪುರುಷ ಮತದಾರರಿದ್ದು, ಒಂದು ಲಕ್ಷ ೪೦ ಸಾವಿರದ ೫೨೩ ಮಹಿಳಾ ಮತದಾರರಿದ್ದು, ಒಟ್ಟು ೨ ಲಕ್ಷ ೮೩ ಸಾವಿರದ ೮೩ ಮತದಾರರು ತಮ್ಮ ಹಕ್ಕು ಚಲಾಯಿಸಲಿದ್ದಾರೆ. ಮತದಾರರು ಮತದಾನದ ವೇಳೆ ಆಧಾರ್ ಕಾರ್ಡ್, ಮನ್ರೇಗಾ ಉದ್ಯೋಗ ಕಾರ್ಡ್, ಬ್ಯಾಂಕ್ ಪಾಸ್‌ಬುಕ್, ಡ್ರೈವಿಂಗ್ ಲೈಸೆನ್ಸ್, ಪಾಸ್‌ಪೋರ್ಟ್ ಸೇರಿದಂತೆ ಇನ್ನಿತರೆ ದಾಖಲೆಗಳನ್ನು ತೋರಿಸಬಹುದು. ಮತದಾನ ದಿನದಂದು ೧೪ ಕ್ಷೇತ್ರಗಳಲ್ಲಿ ಸಾರ್ವತ್ರಿಕ ರಜೆಯನ್ನು ಘೋಷಿಸಲಾಗಿದೆ.

<><*<><>*><>

ಕರ್ನಾಟಕದ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳು ದೇಶಕ್ಕೆ ಮಾದರಿಯಾಗಿವೆ ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕ ಗಾಂಧಿ ಹೇಳಿದ್ದಾರೆ. ದಾವಣಗೆರೆಯಲ್ಲಿಂದು ಕಾಂಗ್ರೆಸ್ ಅಭ್ಯರ್ಥಿ ಪರ ಮತಯಾಚಿಸಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳ ಮೂಲಕ ಜನರ ಸ್ವತ್ತನ್ನು ಮರಳಿ ಜನರಿಗೆ ಕೊಡುವ ಕೆಲಸವನ್ನು ಕಾಂಗ್ರೆಸ್ ಮಾಡುತ್ತಿದೆ. ಆದರೆ ಕೇಂದ್ರದಲ್ಲಿ ಅಧಿಕಾರದಲ್ಲಿರುವ ಬಿಜೆಪಿ ಸರ್ಕಾರ ಜನಪರವಾದ ಯಾವುದೇ ಕೆಲಸ ಮಾಡಿಲ್ಲ ಎಂದು ಆರೋಪಿಸಿದರು. ಗ್ಯಾರಂಟಿ ಯೋಜನೆಗಳು ದೇಶದ ಜನರಿಗೆ ಆಸರೆಯಾಗಿವೆ ಎಂದರು. ಇನ್ನೊಂದೆಡೆ ಬೆಳಗಾವಿಯಲ್ಲಿ ಬಿಜೆಪಿ ಅಭ್ಯರ್ಥಿ ಪರ ಪ್ರಚಾರ ನಡೆಸಿದ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ಭಾರತವನ್ನು ವಿಶ್ವದ ಅಗ್ರಗಣ್ಯ ದೇಶಗಳೊಂದಿಗೆ ಕೊಂಡಯ್ಯಬಹುದು ಎಂಬುದನ್ನು ಪ್ರಧಾನಿ ನರೇಂದ್ರ ಮೋದಿ ತೋರಿಸಿಕೊಟ್ಟಿದ್ದಾರೆ ಎಂದು ಹೇಳಿದರು.

<><*<><>*><>

ಹಾವೇರಿ ಲೋಕಸಭಾ ಕ್ಷೇತ್ರದಲ್ಲಿ ಪಾರದರ್ಶಕ ಹಾಗೂ ವ್ಯವಸ್ಥಿತವಾಗಿ ಚುನಾವಣೆ ನಡೆಸಲು ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿಕೊಂಡಿದೆ. ಈಗಾಗಲೇ ೮೫ ವರ್ಷ ಮೇಲ್ಪಟ್ಟ ೧ ಸಾವಿರದ ೧೬೧ ಹಿರಿಯ ನಾಗರಿಕರು ಹಾಗೂ ೬೧೯ ವಿಶೇಷಚೇತನರು ಮತದಾನ ಮಾಡಿದ್ದಾರೆ ಎಂದು ಎಂದು ಜಿಲ್ಲಾ ಚುನಾವಣಾಧಿಕಾರಿ ರಘುನಂದನ್ ಮೂರ್ತಿ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಲೋಕಸಭೆ ಮತ್ತು ಸುರಪುರ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ಮತದಾನವನ್ನು ಶಾಂತಿಯುತವಾಗಿ ಯಶಸ್ವಿಗೊಳಿಸಲು ಯಾದಗಿರಿ ಜಿಲ್ಲೆಯ ಪೊಲೀಸರು ಸಜ್ಜಾಗಿದ್ದಾರೆ. ಕೇಂದ್ರ ಸೇನಾ ತುಕಡಿಗಳ ಜತೆಗೆ ಹೆಚ್ಚುವರಿ ಪೊಲೀಸರನ್ನು ಇದೇ ೭ರ ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಜಿ.ಸಂಗೀತಾ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಉತ್ತರಕನ್ನಡ ಜಿಲ್ಲೆಯಲ್ಲಿ ಮತದಾನ ಜಾಗೃತಿಯ ಕುರಿತಂತೆ ಈಗಾಗಲೇ ಹಲವು ವೈವಿಧ್ಯಮಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗಿದೆ. ಮತದಾರರು ಅಧಿಕ ಪ್ರಮಾಣದಲ್ಲಿ ಮತದಾನ ಮಾಡಿ  ಜಿಲ್ಲೆಯ ಖ್ಯಾತಿಯನ್ನು ಮುಗಿಲೆತ್ತರಕ್ಕೆ ಏರಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಗಂಗೂಬಾಯಿ ಮಾನಕರ ಕರೆ ನೀಡಿದ್ದಾರೆ.

ಗದಗ ಜಿಲ್ಲೆಯ ಮುಂಡರಗಿ ತಾಲೂಕ ಪಂಚಾಯತ್ ಆವರಣದಲ್ಲಿ ಸ್ವೀಪ್ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಕಡ್ಡಾಯ ಮತದಾನಕ್ಕಾಗಿ ಕಾಲ್ನಡಿಗೆ ಜಾಥಾ ಕಾರ್ಯಕ್ರಮಕ್ಕೆ ಮುಂಡರಗಿ ತಾಲೂಕು ಪಂಚಾಯತ್ ಸಹಾಯಕ ನಿರ್ದೇಶಕ ಪ್ರವೀಣ ಗೋಣೆಮ್ಮನವರ ಚಾಲನೆ ನೀಡಿದರು.

ಕುಟುಂಬ ಸಮೇತವಾಗಿ ಬಂದು ಕಡ್ಡಾಯವಾಗಿ ಮತದಾನ ಮಾಡಿ ನಿಮ್ಮ?ದ ನಾಯಕರನ್ನು ಆಯ್ಕೆ ಮಾಡಿ ಎಂದು ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಗರಿಮಾ ಪನ್ವಾರ್ ಕರೆ ನೀಡಿದ್ದಾರೆ.

ಬಳ್ಳಾರಿ ಲೋಕಸಭಾ ಚುನಾವಣೆಯ ಹಿನ್ನೆಲೆಯಲ್ಲಿ ವಿಜಯನಗರ ಜಿಲ್ಲೆಯಾದ್ಯಂತ ಮತದಾನದ ಪ್ರಮಾಣ ಹೆಚ್ಚಿಸಲು  ಸ್ವೀಪ್ ಸಮಿತಿಯಿಂದ  ಎತ್ತಿನಬಂಡಿ ಜಾಥಾ, ವಿಶೇಷಚೇತನರಿಂದ ಟ್ರೈಸೈಕಲ್ ರ‍್ಯಾಲಿ ಸೇರಿದಂತೆ ಅನೇಕ ವಿನೂತನ ಕಾರ್ಯಕ್ರಮಗಳನ್ನು ನಡೆಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿ ಬಿ ಸದಾಶಿವಪ್ರಭು ಹೇಳಿದರು.

ಧಾರವಾಡ ಲೋಕಸಭಾ ಕ್ಷೇತ್ರದ ಹುಬ್ಬಳ್ಳಿ ತಾಲೂಕಿನ ಉಮಚಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಕೆರೆ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಜನಜಾಗೃತಿ ಕಾರ್ಯಕ್ರಮ ನಡೆಯಿತು.

ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಶಿವಮೊಗ್ಗ ಲೋಕಸಭಾ ಕ್ಷೇತ್ರದ ಬೈಂದೂರು ಸರಕಾರಿ ಪದವಿ ಪೂರ್ವ ಕಾಲೇಜಿನ ಮಸ್ಟರಿಂಗ್ ಕೇಂದ್ರಕ್ಕೆ ತೆರಳಲು ಅನುಕೂಲವಾಗುವಂತೆ ಉಚಿತ ಬಸ್ ವ್ಯವಸ್ಥೆಯನ್ನು ಎಲ್ಲಾ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಾಡಲಾಗಿದೆ ಎಂದು ಉಡುಪಿ ಜಿಲ್ಲಾಧಿಕಾರಿ ಡಾ.ವಿದ್ಯಾ.ಕೆ ಕುಮಾರಿ ತಿಳಿಸಿದ್ದಾರೆ.

ಇದೇ ೭ ರಂದು ನಡೆಯುವ ಲೋಕಸಭಾ ಚುನಾವಣೆಗೆ ಗದಗ ಜಿಲ್ಲಾಡಳಿತ ಅಗತ್ಯ ಸಿದ್ಧತೆ ಮಾಡಿಕೊಂಡಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದ್ದಾರೆ.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ವಿಜಯಪುರದಲ್ಲಿ ಮತದಾನ ಜಾಗೃತಿ ಅಭಿಯಾನದ ಅಂಗವಾಗಿ ರಂಗೋಲಿ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು,  ರಂಗೋಲಿ ಸ್ಪರ್ಧೆಯಲ್ಲಿ ವಿವಿಧ ಗ್ರಾಮಗಳಿಂದ ಆಗಮಿಸಿದ ಸ್ವಸಹಾಯ ಸಂಘದ ಮಹಿಳೆಯರು ಮತದಾನ ಜಾಗೃತಿ ರಂಗೋಲಿ ಬಿಡಿಸಿದರು.

ಕೊಪ್ಪಳದಲ್ಲಿ ಲೋಕಸಭಾ ಚುನಾವಣೆಗೆ ಬೇಕಾದ ಎಲ್ಲಾ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ನಲಿನ್ ಅತುಲ್ ತಿಳಿಸಿದ್ದಾರೆ.

**<><*<><>*><>**

೧೮ನೇ ಲೋಕಸಭೆ ಸದಸ್ಯರ ಆಯ್ಕೆಗಾಗಿ ನಡೆದಿರುವ ಸಾರ್ವತ್ರಿಕ ಚುನಾವಣೆಗಾಗಿ ಕರ್ನಾಟಕದ ೧೪ ಲೋಕಸಭಾ ಕ್ಷೇತ್ರಗಳಲ್ಲಿ ಈ ತಿಂಗಳ ೭ರಂದು ಎರಡನೇ ಹಂತದ ಮತದಾನ ನಡೆಯಲಿದೆ.  ಚಿಕ್ಕೋಡಿ, ಬೆಳಗಾವಿ, ಬಾಗಲಕೋಟೆ, ವಿಜಯಪುರ, ಕಲಬುರಗಿ, ರಾಯಚೂರು, ಬೀದರ್, ಕೊಪ್ಪಳ, ಬಳ್ಳಾರಿ, ಹಾವೇರಿ, ಧಾರವಾಡ, ಉತ್ತರ ಕನ್ನಡ, ದಾವಣಗೆರೆ ಮತ್ತು ಶಿವಮೊಗ್ಗ ಕ್ಷೇತ್ರಗಳಲ್ಲಿ ಮತದಾನ ದಿನಕ್ಕಾಗಿ ಬಿರುಸಿನ ಚಟುವಟಿಕೆ ಪ್ರಗತಿಯಲ್ಲಿದೆ. ಈ ಮತಕ್ಷೇತ್ರಗಳ ಸಮಗ್ರ ಮಾಹಿತಿ ಚಿತ್ರಣವನ್ನು ಬೆಂಗಳೂರು ಆಕಾಶವಾಣಿ ಪ್ರಾದೇಶಿಕ ಸುದ್ದಿ ವಿಭಾಗದ ಜಿಲ್ಲಾ ವರದಿಗಾರರು ಸಿದ್ಧಪಡಿಸುತ್ತಿದ್ದು, ಇಂದು

**ಹಾವೇರಿ ಲೋಕಸಭಾ ಕ್ಷೇತ್ರದ ಪರಿಚಯ**

ವರದಿಯನ್ನು ಸಿದ್ಧಪಡಿಸಿರುವವರು ನಮ್ಮ ಜಿಲಾ ಪ್ರತಿನಿಧಿ ಮಂಜುನಾಥ ಗುಡಿಸಾಗರ

ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಚುನಾವಣೆ ಇದೇ ೭ ರಂದು ಜರುಗಲಿದ್ದು, ಪಾರದರ್ಶಕ ಹಾಗೂ ವ್ಯವಸ್ಥಿತವಾಗಿ ಚುನಾವಣೆ ನಡೆಸಲು ಜಿಲ್ಲಾಡಳಿತ ಸಿದ್ಧತೆ ಮಾಡಿಕೊಂಡಿದೆ. ೨೦೦೮ ರಲ್ಲಿ ಹಾವೇರಿ ಜಿಲ್ಲೆಯ ಐದು ಹಾಗೂ ಗದಗ ಜಿಲ್ಲೆಯ ಮೂರು ವಿಧಾನಸಭಾ ಕ್ಷೇತ್ರಗಳನ್ನು ಸೇರಿಸಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರ ರಚನೆ ಮಾಡಲಾಗಿದೆ. ಹಾವೇರಿ ಗದಗ ಲೋಕಸಭಾ ಕ್ಷೇತ್ರದಲ್ಲಿ ಒಟ್ಟು ೧೭ ಲಕ್ಷ ೭೦ ಸಾವಿರದ ೫೭೭ ಮತದಾರರು ಇದ್ದಾರೆ. ಇದರಲ್ಲಿ ೮ ಲಕ್ಷ ೯೨ ಸಾವಿರದ ೪೮೯ ಪುರುಷರು ಮತ್ತು ೮ ಲಕ್ಷ ೭೮ ಸಾವಿರದ ಮಹಿಳೆಯರು ಮತ್ತು ೮೮ ಇತರೆ ಮತದಾರರಿದ್ದಾರೆ.

ಈ ಬಾರಿ ೪೯ ಸಾವಿರದ ೧೮೦ ಮಂದಿ ಯುವ ಮತದಾರರು ಹಾಗೂ ೧ ಸಾವಿರದ ೬೦೩ ಸೇವಾ ಮತದಾರರು ಹಾಗೂ ೨೫ ಸಾವಿರದ ೩೩೬ ವಿಶೇಷಚೇತನ ಮತದಾರರು ತಮ್ಮ ಹಕ್ಕು ಚಲಾಯಿಸುತ್ತಿದ್ದಾರೆ.

ಹಾವೇರಿ ಲೋಕಸಭಾ ವ್ಯಾಪ್ತಿಯಲ್ಲಿ ೧ ಸಾವಿರದ ೩೩೬ ಸ್ಥಳಗಳಲ್ಲಿ ೧ ಸಾವಿರದ ೯೮೨ ಮತಗಟ್ಟೆಗಳನ್ನು ಗುರುತಿಸಲಾಗಿದ್ದು, ಪ್ರತಿ ಮತಗಟ್ಟೆಯಲ್ಲೂ ಕುಡಿಯುವ ನೀರು, ವಿದ್ಯುತ್ ವ್ಯವಸ್ಥೆ, ಲೈಟಿಂಗ್, ಶೌಚಾಲಯ, ಪಿಠೋಪಕರಣ, ರ್‍ಯಾಂಪ್, ನೆರಳಿನ ವ್ಯವಸ್ಥೆ ಕಲ್ಪಿಸಲಾಗಿದೆ. ಹಾವೇರಿ ಲೋಕಸಭಾ ಕ್ಷೇತ್ರದ ಶಿರಹಟ್ಟಿ, ಗದಗ, ರೋಣ, ಹಾನಗಲ್, ಹಾವೇರಿ, ಬ್ಯಾಡಗಿ, ಹಿರೇಕೆರೂರು ಹಾಗೂ ರಾಣೇಬೆನ್ನೂರು ನಗರಗಳಲ್ಲಿ ಮಸ್ಟರಿಂಗ್ ಮತ್ತು ಡಿ ಮಸ್ಟರಿಂಗ್ ಕಾರ್ಯ ಜರುಗಲಿದೆ.

ಹಾವೇರಿ ಸರ್ಕಾರಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ಮತ ಎಣಿಕೆ ಕಾರ್ಯ ನಡೆಯಲಿದೆ. ೨೦೧೪ ರ ಲೋಕಸಭಾ ಚುನಾವಣೆಯಲ್ಲಿ ಶೇಕಡ ೭೧.೬೨ ಹಾಗೂ ೨೦೧೯ರ ಲೋಕಸಭಾ ಚುನಾವಣೆಯಲ್ಲಿ ಶೇಕಡ ೭೪.೨೧ ರಷ್ಟು ಮತದಾರರು ಮತದಾನ ಮಾಡಿದ್ದಾರೆ. ಈ ಬಾರಿಯ ಚುನಾವಣೆಯಲ್ಲಿ ಮತದಾನ ಪ್ರಮಾಣ ಹೆಚ್ಚಿಸಲು ಜಿಲ್ಲಾ ಸ್ವೀಪ್ ಸಮಿತಿ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಚುನಾವಣೆ ರಾಯಭಾರಿಗಳಾಗಿ ಕನ್ನಡ ಕೋಗಿಲೆ ಖ್ಯಾತಿಯ ಖಾಸೀಂ ಅಲಿ, ಅಕ್ಷತಾ ಕೆ.ಸಿ., ಜನಪದ ಕಲಾವಿದ ಮಾಲತೇಶ ಗರಡಿಮನಿ ನೇಮಿಸಿಕೊಂಡಿದೆ.

೨೦೧೯ರ ಚುನಾವಣೆಯಲ್ಲಿ ಸ್ಪರ್ಧಿಸಿದ್ದ ಸಂಸದ ಶಿವಕುಮಾರ ಉದಾಸಿ ೬ ಲಕ್ಷ ೮೩ ಸಾವಿರದ ೬೬೦ ಮತಗಳನ್ನು ಪಡೆದು ಕಾಂಗ್ರೆಸ್‌ನ ಡಿ.ಆರ್ ಪಾಟೀಲ್ ಸೋಲಿಸಿ ಪುನರ್ ಆಯ್ಕೆಯಾದರು. ಆದರೆ ಈ ಬಾರಿ ಈ ಕ್ಷೇತ್ರದ ವ್ಯಾಪ್ತಿಯಲ್ಲಿರುವ ೮ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಪ್ರಾಬಲ್ಯ ಸಾಧಿಸಿದೆ. ಕೈ ಪಕ್ಷ ೭ರಲ್ಲಿ ಗೆಲುವು ಸಾಧಿಸಿದ್ದರೆ ಬಿಜೆಪಿ ಕೇವಲ ಒಂದು ಸ್ಥಾನದಲ್ಲಿ ಮಾತ್ರ ಜಯ ಸಾಧಿಸಿದೆ. ಶಿವಕುಮಾರ ಉದಾಸಿ ಈ ಬಾರಿ ಚುನಾವಣೆಗೆ ಸ್ಪರ್ಧಿಸುತ್ತಿಲ್ಲ.

ಈ ಬಾರಿ ಬಿಜೆಪಿಯಿಂದ ಬಸವರಾಜ ಬೊಮ್ಮಾಯಿ, ಕಾಂಗ್ರೆಸ್‌ನಿಂದ ಆನಂದಸ್ವಾಮಿ ಗಡ್ಡದೇವರಮಠ ಸೇರಿದಂತೆ ಒಟ್ಟು ೧೪ ಅಭ್ಯರ್ಥಿಗಳು ಚುಣಾವಣಾ ಕಣದಲ್ಲಿದ್ದು, ಅಬ್ಬರದಿಂದ ಚುನಾವಣಾ ಪ್ರಚಾರ ನಡೆಸುತ್ತಿದ್ದಾರೆ.

<><*<><>*><>

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ - ಎನ್‌ಟಿಎ ನಾಳೆ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ ನೀಟ್ ಪರೀಕ್ಷೆ ನಡೆಸಲು ಸಜ್ಜಾಗಿದೆ.

ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳಲ್ಲಿ ವೈದ್ಯಕೀಯ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ಈ ಪರೀಕ್ಷೆ ಅವಕಾಶ ಕಲ್ಪಿಸುತ್ತದೆ.

ದೇಶಾದ್ಯಂತ ೫೫೭ ನಗರಗಳು ಮತ್ತು ವಿದೇಶಗಳಲ್ಲಿರುವ ೧೪ ವಿವಿಧ ಕೇಂದ್ರಗಳಲ್ಲಿ ೨೪ ಲಕ್ಷಕ್ಕೂ ಹೆಚ್ಚು ಅಭ್ಯರ್ಥಿಗಳು ಈ ವರ್ಷ ಪರೀಕ್ಷೆಗೆ ಹಾಜರಾಗಲಿದ್ದಾರೆ.

ಭಾರತೀಯ ಕಾಲಮಾನದ ಪ್ರಕಾರ ಮಧ್ಯಾಹ್ನ ೨ ರಿಂದ ಸಂಜೆ ೫.೨೦ ರವರೆಗೆ ಪರೀಕ್ಷೆ ನಡೆಯಲಿದೆ. ಫೋಟೋ, ಸಹಿ ಮತ್ತು ರೋಲ್ ನಂಬರ್ ಬಾರ್ ಕೋಡ್ ಇರುವ ಡೌನ್ಲೋಡ್ ಮಾಡಿದ ಪ್ರವೇಶ ಪತ್ರಗಳನ್ನು ಸಾದರಪಡಿಸುವಂತೆ ಎನ್‌ಟಿಎ ಅಭ್ಯರ್ಥಿಗಳಿಗೆ ನಿರ್ದೇಶನ ನೀಡಿದೆ. ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯೊಳಗೆ ಡಿಜಿಟಲ್ ಸಾಧನೆ ಕೈಗಡಿಯಾರ, ಬ್ಲೂಟೂತ್ ತರುವುದನ್ನು ನಿಷೇಧಿಸಿದೆ.

ನಿಗದಿತ ಸಮಯಕ್ಕಿಂತ ೩೦ ನಿಮಿಷ ಮೊದಲು ಅಭ್ಯರ್ಥಿಗಳು ಪರೀಕ್ಷಾ ಕೇಂದ್ರಗಳನ್ನು ತಲುಪಬೇಕು.

<><*<><>*><>

ಮಲಪ್ರಭಾ ಜಲಾಶಯದಿಂದ ಮಲಪ್ರಭಾ ಬಲದಂಡೆ ಕಾಲುವೆ ಹಾಗೂ ಗದಗ ಜಿಲ್ಲೆಯ ನರಗುಂದ ಶಾಖಾ ಕಾಲುವೆಗೆ ಇದೇ ೧೪ ರಿಂದ ನೀರು ಹರಿಸಲಾಗುತ್ತಿದೆ. ಜಿಲ್ಲೆಯಲ್ಲಿ ಕುಡಿಯುವ ನೀರು ಪೂರೈಕೆಯಲ್ಲಿ ಸಮಸ್ಯೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಸೂಚಿಸಿದ್ದಾರೆ. ಪ್ರಸಕ್ತ ಸಾಲಿನಲ್ಲಿ ಚಿತ್ರದುರ್ಗ ತಾಲ್ಲೂಕನ್ನು ಬರಪೀಡಿತ ತಾಲ್ಲೂಕು ಎಂದು ಘೋಷಣೆ ಮಾಡಿರುವ ಹಿನ್ನಲೆಯಲ್ಲಿ ಬರ ನಿರ್ವಹಣೆ ಅಂಗವಾಗಿ ಜನ-ಜಾನುವಾರುಗಳಿಗೆ ಕುಡಿಯುವ ನೀರನ್ನು ಒದಗಿಸುವ ಸಂಬಂಧ ಚಿತ್ರದುರ್ಗ ತಾಲ್ಲೂಕು ಕಚೇರಿಯ ಸಹಾಯವಾಣಿ ಸಂಖ್ಯೆ ೦೮೧೯೪-೨೨೨೪೧೬ ಗೆ ಸಾರ್ವಜನಿಕರು ಕರೆ ಮಾಡಿ ಮಾಹಿತಿ ನೀಡಬಹುದು ಎಂದು ಚಿತ್ರದುರ್ಗ ತಾಲ್ಲೂಕು ತಹಶೀಲ್ದಾರ್ ಡಾ.ನಾಗವೇಣಿ ತಿಳಿಸಿದ್ದಾರೆ.

<><*<><>*><>

ಮೈಸೂರು ಜಿಲ್ಲೆಯ ಹಿರಿಯ ಕೆಎಎಸ್ ಅಧಿಕಾರಿ ಅಪರ ಜಿಲ್ಲಾಧಿಕಾರಿ ಪಿ. ಶಿವರಾಜು ಅವರಿಗೆ ಮೈಸೂರು ವಿಶ್ವವಿದ್ಯಾನಿಲಯದಿಂದ ಪಿಎಚ್ ಡಿ ಪ್ರದಾನ ಮಾಡಲಾಗಿದೆ. "ಮಳವಳ್ಳಿ ತಾಲೂಕಿನ ಸ್ಥಳನಾಮಗಳ ಸಾಂಸ್ಕೃತಿಕ ಅಧ್ಯಯನ ಎಂಬ ಶೀರ್ಷಿಕೆಯಡಿಯಲ್ಲಿ ಸಂಶೋಧನೆ ನಡೆಸಿ, ಮೈಸೂರು ವಿಶ್ವವಿದ್ಯಾಲಯದಲ್ಲಿ ಪ್ರಬಂಧ ಮಂಡಿಸಿದ್ದರು. ಮಹಾರಾಜ ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥರಾದ ಪ್ರೊ.ವಿಶ್ವನಾಥ್ ಮಾರ್ಗದರ್ಶನದಲ್ಲಿ ಸಂಶೋಧನೆ ನಡೆಸಿದ್ದರು. ಜಿಲ್ಲೆಯ ಹಿರಿಯ ಅಧಿಕಾರಿಯಾಗಿ ಬಿಡುವಿಲ್ಲದ ಕೆಲಸಗಳ ಮಧ್ಯೆಯೂ ಅಧ್ಯಯನ ಕೈಬಿಡದೆ ಸಂಶೋಧನೆ ಕೈಗೊಂಡಿದ್ದಾರೆ.

<><*<><>*><>

ಇನ್ನು ಹವಾವರ್ತಮಾನ

ದಕ್ಷಿಣ ಒಳನಾಡಿನ ಒಂದೆರಡು ಕಡೆಗಳಲ್ಲಿ ಮಳೆಯಾಗಿದೆ. ಕರಾವಳಿ ಮತ್ತು ಉತ್ತರ ಒಳನಾಡಿನಲ್ಲಿ ಒಣಹವೆ ಇತ್ತು.

ಕಲಬುರಗಿ ಮತ್ತು ರಾಯಚೂರಿನಲ್ಲಿ ಗರಿಷ್ಠ ೪೪ ಡಿಗ್ರಿ ಸೆಲ್ಸಿಯೆಸ್ ಉಷ್ಣಾಂಶ ದಾಖಲಾಗಿದೆ.

ಮುಂದಿನ ೭ ದಿನಗಳ ಕಾಲ ರಾಜ್ಯದಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಇಂದು ಕೊಡಗು, ಮೈಸೂರು, ಚಾಮರಾಜನಗರ, ರಾಮನಗರ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ ಮತ್ತು ತುಮಕೂರು ಜಿಲ್ಲೆಗಳ ಹಲವೆಡೆ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ರಾಜ್ಯದ ಉಳಿದ ಜಿಲ್ಲೆಗಳಲ್ಲಿ ಒಣ ಹವೆ ಮುಂದುವರೆಯಲಿದೆ.

<><*<><>*><>

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಗುಜರಾತ್ ಟೈಟನ್ಸ್ ತಂಡಗಳು ಎದುರಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>